I/727812/2024

**ಕರ್ನಾಟಕ ಸರ್ಕಾರ**

**ತಾಂತ್ರಿಕ ಶಿಕ್ಷಣ ಇಲಾಖೆ**

**DTE-ADMI0ACM2/ 75 /2024** (e-1620113)

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ:17-12-2024.

**-:: ಸು ತ್ತೋ ಲೆ ::-**

**ವಿಷಯ:** 2024-25ನೇ ಸಾಲಿನ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್‌ಗಳಲ್ಲಿ 02, 04 ಮತ್ತು 06ನೇ ಸೆಮಿಸ್ಟರ್ ತರಗತಿಗಳಿಗೆ ಮರುಪ್ರವೇಶ ಪಡೆಯಲು ಅಂತಿಮ ದಿನಾಂಕ ನಿಗಧಿಪಡಿಸುವ ಕುರಿತು.

**ಉಲ್ಲೇಖ:** ಈ ಕಛೇರಿ ಪರೀಷ್ಕೃತ ಶೈಕ್ಷಣಿಕ ವೇಳಾಪಟ್ಟಿ ದಿ:19.10.2024.

********

2024-25ನೇ ಸಾಲಿನಲ್ಲಿ ರಾಜ್ಯದ ಎಲ್ಲಾ ಡಿಪ್ಲೋಮಾ ಕಾಲೇಜುಗಳಲ್ಲಿ ಪ್ರವೇಶ ಪಡೆದ ಅಬ್ಯರ್ಥಿಗಳಿಗೆ ನಿಗಧಿತ ಅವಧಿಯೊಳಗೆ ಪಾಠ ಪ್ರವಚನಗಳನ್ನು ಪೂರ್ಣಗೊಳಿಸುವ ನಿಟ್ಟಿನಲ್ಲಿ 02, 04 ಮತ್ತು 06ನೇ ಸೆಮಿಸ್ಟರ್ ತರಗತಿಗಳ ಪರೀಷ್ಕೃತ ಶೈಕ್ಷಣಿಕ ವೇಳಾಪಟ್ಟಿಯನ್ನು ಉಲ್ಲೇಖಿತ ಈ ಕಛೇರಿ ಸುತ್ತೋಲೆಯಲ್ಲಿ ಪ್ರಕಟಿಸಲಾಗಿತ್ತು. ಸದರಿ ಸುತ್ತೋಲೆಯಲ್ಲಿನ ಸೂಚನೆಗಳ ಪ್ರಕಾರ ಪಠ್ಯಕ್ರಮದನ್ವಯ ಪಾಠಪ್ರವಚನಗಳು ಮತ್ತು ಪ್ರಾಯೋಗಿಕ ತರಗತಿಗಳನ್ನು ನಿಗಧಿತ ಅವಧಿಯ ಒಳಗೆ ಮುಗಿಸುವಲ್ಲಿ ಎಲ್ಲಾ ರೀತಿಯ ಸೂಕ್ತ ಕ್ರಮಗಳನ್ನು ತೆಗೆದುಕೊಳ್ಳಬೇಕೆಂದು ತಿಳಿಸಲಾಗಿದೆ.

**02, 04 ಮತ್ತು 06ನೇ ಸೆಮಿಸ್ಟರ್ ತರಗತಿಗಳಿಗೆ ನಿಯಮಗಳ ಪ್ರಕಾರ ಈ ಕೆಳಕಂಡ ಅಂಶಗಳಂತೆ ವಿದ್ಯಾರ್ಥಿಗಳು ಪ್ರವೇಶಕ್ಕೆ ಅರ್ಹರಿರುವುದಿಲ್ಲ.**

- ಹಿಂದಿನ ಸೆಮಿಸ್ಟರ್‌ನಲ್ಲಿ ಹಾಜರಾತಿ ಕಡಿಮೆ ಇದ್ದಲ್ಲಿ, ಅಂತಹ ವಿದ್ಯಾರ್ಥಿಗಳು ಪ್ರವೇಶಕ್ಕೆ ಅರ್ಹರಿರುವುದಿಲ್ಲ.
- ಪರೀಕ್ಷಾ ದುರಾಚಾರ (Suspected Malpractice) ಎಸಗಿದ್ದಲ್ಲಿ, ಅಂತಹ ವಿದ್ಯಾರ್ಥಿಗಳಿಗೆ ತಾಂತ್ರಿಕ ಪರೀಕ್ಷಾ ಮಂಡಳಿಯಿಂದ ಅನುಮತಿ ಪಡೆಯದೇ ಪ್ರವೇಶ ನೀಡತಕ್ಕದ್ದಲ್ಲ
- ಪ್ರವೇಶಾನುಮೋದನೆಯಾಗದೇ ತಡೆಹಿಡಿದಿದ್ದಲ್ಲಿ ಅಂತಹ ವಿದ್ಯಾರ್ಥಿಗಳು ಪ್ರವೇಶಕ್ಕೆ ಅರ್ಹರಿರುವುದಿಲ್ಲ.

ಮುಂದುವರೆದು, 2024-25ನೇ ಶೈಕ್ಷಣಿಕ ಸಾಲಿನಲ್ಲಿ 02, 04 ಮತ್ತು 06ನೇ ಸೆಮಿಸ್ಟರ್ ತರಗತಿಗಳಿಗೆ **ಮರುಪ್ರವೇಶ(Repeater)** ಪ್ರವೇಶ ಪಡೆಯುವ ವಿದ್ಯಾರ್ಥಿಗಳು ನಿಗಧಿತ ಶುಲ್ಕವನ್ನು ಪಾವತಿಸಿ ಮರು ಪ್ರವೇಶ ಪಡೆಯಲು ಈ ಕೆಳಕಂಡಂತೆ ಅಂತಿಮ ದಿನಾಂಕ ನಿಗಧಿಪಡಿಸಲಾಗಿದೆ.

1. **ದಿನಾಂಕ:31-12-2024 ರವರೆಗೆ ಯಾವುದೇ ದಂಡ ಶುಲ್ಕವಿಲ್ಲದೆ ಅರ್ಹ ಶುಲ್ಕವನ್ನು ಮಾತ್ರ ಪಡೆದು ಪ್ರವೇಶ ನೀಡುವುದು.**

I/727812/2024

2. **ದಿನಾಂಕ:07-01-2025 ರವರೆಗೆ ರೂ.200/-ರ ದಂಡ ಶುಲ್ಕದೊಂದಿಗೆ ಅರ್ಹ ಶುಲ್ಕವನ್ನು ಪಾವತಿಸಿಕೊಂಡು ಪ್ರವೇಶ ನೀಡುವುದು.**
3. **ದಿನಾಂಕ:15-01-2025 ರವರೆಗೆ ರೂ.400/-ರ ದಂಡ ಶುಲ್ಕದೊಂದಿಗೆ ಅರ್ಹ ಶುಲ್ಕವನ್ನು ಪಾವತಿಸಿಕೊಂಡು ಪ್ರವೇಶ ನೀಡುವುದು.**
4. **ಅಂತಿಮವಾಗಿ ದಿ:22-01-2025 ರವರೆಗೆ ರೂ.1000/- ದಂಡ ಶುಲ್ಕದೊಂದಿಗೆ ಅರ್ಹ ಶುಲ್ಕವನ್ನು ಪಾವತಿಸಿಕೊಂಡು ಪ್ರವೇಶ ನೀಡುವುದು.**

ಮೇಲ್ಕಂಡ ಅಂಶಗಳನ್ನು ಗಮನದಲ್ಲಿರಿಸಿಕೊಂಡು ಪ್ರಾಂಶುಪಾಲರುಗಳು ನಿಯಮಗಳ ಪ್ರಕಾರ ಪ್ರವೇಶ ಪಡೆಯಲು ಅರ್ಹರಿರುವ ವಿದ್ಯಾರ್ಥಿಗಳಿಗೆ ಪ್ರವೇಶ ನೀಡುವಲ್ಲಿ ಸೂಕ್ತ ಕ್ರಮ ತೆಗೆದುಕೊಳ್ಳುವುದು ನಿಯಮಗಳನ್ನು ಮೀರಿ ಪ್ರವೇಶಗಳನ್ನು ನೀಡಿದಲ್ಲಿ ಅಂತಹ ಪ್ರಕರಣಗಳಿಗೆ ಪ್ರಾಂಶುಪಾಲರುಗಳನ್ನು ನೇರ ಹೊಣೆಗಾರರನ್ನಾಗಿ ಮಾಡಲಾಗುವುದು. ಪ್ರವೇಶ ಕೋರಿ ತಡವಾಗಿ ಸಲ್ಲಿಸುವ ಮನವಿಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ವಿದ್ಯಾರ್ಥಿಗಳಿಗೆ ಸಾಕಷ್ಟು ತಿಳುವಳಿಕೆ ನೀಡುವ ಬಗ್ಗೆ ಅಗತ್ಯ ಕ್ರಮ ತೆಗೆದುಕೊಳ್ಳುವುದು. ಈ ನಿಟ್ಟಿನಲ್ಲಿ ಯಾವುದೇ ಮನವಿಗಳನ್ನು ಆಯುಕ್ತಾಲಯಕ್ಕೆ ಕಳುಹಿಸದೆ ನಿಯಮಗಳ ಪ್ರಕಾರ ಪ್ರಿನ್ಸಿಪಾಲರ ಹಂತದಲ್ಲೇ ಇತ್ಯರ್ಥಗೊಳಿಸಬೇಕೆಂದು ತಿಳಿಸಲಾಗಿದೆ. ತರಗತಿಗಳನ್ನು ನಿಗಧಿತ ಅವಧಿಯಲ್ಲಿ ಪ್ರಾರಂಭಿಸಿ, ಪಠ್ಯಕ್ರಮಕ್ಕೆ ವಿಶೇಷ ತರಗತಿಗಳನ್ನು ತೆಗೆದುಕೊಂಡು ಶೈಕ್ಷಣಿಕ ವೇಳಾಪಟ್ಟಿಯ ಪ್ರಕಾರ ಮುಕ್ತಾಯಗೊಳಿಸುವುದು.

Signed by
Manjushree N
Date: 20-12-2024 12:33:15

**ಆಯುಕ್ತರು**
**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**
**ಬೆಂಗಳೂರು**

**ಇವರಿಗೆ,**

*ಎಲ್ಲಾ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರಿಗೆ - ಸೂಕ್ತ ಅನುಸರಣೆ ಹಾಗೂ ಮಾಹಿತಿಗಾಗಿ.*

**ಪ್ರತಿ ಇವರಿಗೆ ಮಾಹಿತಿಗಾಗಿ:**

1. ಆಯುಕ್ತರವರ ಆಪ್ತಶಾಖೆಗೆ.
2. ನಿರ್ದೇಶಕರವರ ಆಪ್ತಶಾಖೆಗೆ.
3. ಕಾರ್ಯದರ್ಶಿಯವರ ಆಪ್ತಶಾಖೆಗೆ.
5. ಇ-ಗವರ್ನೆನ್ಸ್ ವಿಭಾಗಕ್ಕೆ - ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
6. ಆರ್.ಡಿ.ಎಂ ವಿಭಾಗಗಳಿಗೆ.
8. ಇಆರ್‌ಎಸ್(3) ವಿಭಾಗಕ್ಕೆ.
9. ಕಛೇರಿ ಪ್ರತಿ.